**ಆಯುಕ್ತರು, ಭೂಮಾಪನ ಕಂದಾಯ ವ್ಯವಸ್ಥೆ ಮತ್ತು ಭೂದಾಖಲೆಗಳ ಇಲಾಖೆ, ಕೆ.ಆರ್.ವೃತ್ತ, ಬೆಂಗಳೂರು**

**ಅಧಿಸೂಚನೆ**

No. SSLR/PMU/13011/10/2023 ದಿನಾಂಕ: 02-02-2023

1. ಇಲಾಖೆಯಲ್ಲಿ ಪರವಾನಗಿ ಭೂಮಾಪಕರುಗಳ ಕೊರತೆ ಇದ್ದು, 2000 ಅರ್ಹ ಅಭ್ಯರ್ಥಿಗಳನ್ನು ಆಯ್ಕೆ ಮಾಡಿಕೊಳ್ಳಲು ಆನ್ ಲೈನ್ ಮುಖಾಂತರ ಅರ್ಜಿಯನ್ನು ಆಹ್ವಾನಿಸಲಾಗಿದೆ.
2. ಪರವಾನಗಿ ನೀಡಲಾದ ಭೂಮಾಪಕರಿಗೆ ಸರ್ಕಾರದ ಆದೇಶ ಸಂಖ್ಯೆ: ಕಂಇ 238 ಎಸ್.ಎಸ್.ಸಿ.2021(1) ಬೆಂಗಳೂರು ದಿನಾಂಕ:09-02-2022 ರಲ್ಲಿ ನಿಗದಿಪಡಿಸಿರುವಂತೆ ಪ್ರತಿ ಅಳತೆ ಕಾರ್ಯಕ್ಕೆ ಇಲಾಖೆಯಿಂದ ಸೇವಾ ಶುಲ್ಕವನ್ನು ನೀಡಲಾಗುವುದು.
3. ಭೂಮಾಪಕನ ಕೆಲಸ ನಿರ್ವಹಿಸಲು ಪರವಾನಗಿ ನೀಡುವ ಪ್ರಕ್ರಿಯೆಯಲ್ಲಿ ಮೊದಲು ಸ್ಪರ್ಧಾತ್ಮಕ ಪರೀಕ್ಷೆಯನ್ನು ನಿರ್ಧಿಷ್ಟಪಡಿಸಿದ ಜಿಲ್ಲಾ ಕೇಂದ್ರಗಳಲ್ಲಿ ಮಾರ್ಚ್ ಅಥವಾ ಏಪ್ರಿಲ್ 2023 ರಲ್ಲಿ ನಡೆಸಲು ಉದ್ದೇಶಿಸಿದೆ. ಪರೀಕ್ಷೆಯ ಖಚಿತ ದಿನಾಂಕವನ್ನು ವೆಬ್ ಸೈಟ್ ವಿಳಾಸವಾದ rdservices.karnataka.gov.in ರಲ್ಲಿ ಮತ್ತು ದಿನಪತ್ರಿಕೆಗಳಲ್ಲಿ 15 ದಿನ ಮುಂಚಿತವಾಗಿ ಪ್ರಚುರಪಡಿಸಲಾಗುವುದು. ನಿಗದಿಪಡಿಸಲಾದ ಅರ್ಜಿಗಳನ್ನು ಸಲ್ಲಿಸಲು ಲಿಂಕ್ ನ್ನು ಮೇಲೆ ತಿಳಿಸಿರುವ ಇಲಾಖಾ ವೆಬ್ ಸೈಟಿನಲ್ಲಿಯೇ ಪ್ರಕಟಿಸಲಾಗಿದೆ. ಅರ್ಜಿಗಳನ್ನು ಆನ್ ಲೈನ್ (Online) ಮುಖಾಂತರ ಸಲ್ಲಿಸತಕ್ಕದ್ದು. ಒಬ್ಬ ಅಭ್ಯರ್ಥಿಯು ಆನ್ ಲೈನ್ ನಲ್ಲಿ ಒಂದು ಅರ್ಜಿಯನ್ನು ಸಲ್ಲಿಸುವುದಕ್ಕೆ ಮಾತ್ರ ಅವಕಾಶ ಕಲ್ಪಿಸಲಾಗಿರುತ್ತದೆ. ಅರ್ಜಿಗಳನ್ನು ಖುದ್ದಾಗಿ ಅಥವಾ ಅಂಚೆ ಮೂಲಕ ಪ್ರತ್ಯೇಕವಾಗಿ ಸಲ್ಲಿಸಲು ಅವಕಾಶವಿರುವುದಿಲ್ಲ. ಅಪೂರ್ಣವಾದ ಅಥವಾ ನಿಯಮಗಳನ್ನು ಪಾಲಿಸದ ಅರ್ಜಿಗಳನ್ನು ಯಾವುದೇ ಮುನ್ಸೂಚನೆ ಇಲ್ಲದೆ ತಿರಸ್ಕರಿಸಲಾಗುವುದು.

**ಆನ್ ಲೈನ್ ಮೂಲಕ ಅರ್ಜಿಗಳನ್ನು at rdservices.karnataka.gov.in ನಲ್ಲಿ ದಿನಾಂಕ: 20-02-2023 ರ ಸಂಜೆ 5-00 ಗಂಟೆಯ ಒಳಗೆ ಸಲ್ಲಿಸಲು ಕೊನೆಯ ದಿನವಾಗಿರುತ್ತದೆ.**

**ಅರ್ಜಿಯನ್ನು ಆನ್ ಲೈನ್ ಮುಖೇನ ಸಲ್ಲಿಸುವ ವಿಧಾನ:-**

**ಅರ್ಜಿ ಶುಲ್ಕ ರೂ.1000/-**

ಇಲಾಖಾ ವೆಬ್ ಸೈಟ್ ವಿಳಾಸವಾದ rdservices.karnataka.gov.in ನ್ನು ಕ್ಲಿಕ್ ಮಾಡಿದಾಗ ಆನ್ ಲೈನ್ ಅರ್ಜಿ (Engagement of Licensed Surveyors -2023) Link ಮೂಡುತ್ತವೆ. ಅಧಿಸೂಚನೆಯನ್ನು ಡೌನ್ ಲೋಡ್ ಮಾಡಿಕೊಳ್ಳಲು ಅವಕಾಶವಿರುತ್ತದೆ. ಅರ್ಜಿಯನ್ನು ಭರ್ತಿ ಮಾಡುವ ಮುನ್ನ ಅಧಿಸೂಚನೆಯನ್ನು ಓದಿ ಅರ್ಥೈಸಿಕೊಳ್ಳತಕ್ಕದ್ದು.

ಆನ್ ಲೈನ್ ಅರ್ಜಿ ಸಲ್ಲಿಸುವ ಮೊದಲು ಅಭ್ಯರ್ಥಿಯ ಪಾಸ್ ಪೋರ್ಟ್ ಅಳತೆಯ ಭಾವಚಿತ್ರವನ್ನು ಬಿಳಿ ಹಾಳೆಯ ಮೇಲೆ ಅಂಟಿಸಿ, ಭಾವಚಿತ್ರದ ಕೆಳಗೆ (ಹಾಳೆಯ ಮೇಲೆ) ಪೂರ್ಣ ಸಹಿ ಮಾಡಿದ ನಂತರ ಸ್ಕ್ಯಾನ್ ಮಾಡಿ ಅಪ್ ಲೋಡ್ ಮಾಡಲು (size 10 to 50 KB) ಸಿದ್ಧತೆ ಮಾಡಿಕೊಳ್ಳಬೇಕು. ಅರ್ಜಿ ತೆರೆಯುವ ಮೊದಲು ಭಾವಚಿತ್ರ ಹಾಗೂ ಸಹಿಯ ಸ್ಕ್ಯಾನಿಂಗ್ ಕಾರ್ಯ ಪೂರ್ಣಗೊಳಿಸಬೇಕು ಮತ್ತು ಅದರ ಸೈಜ್ ನ್ನು ಕಡ್ಡಾಯವಾಗಿ ಖಾತರಿಪಡಿಸಿಕೊಳ್ಳಬೇಕು.

2/2/23

- ✓ ಇಲಾಖೆಯ ಅಧಿಕೃತ rdservices.karnataka.gov.in URL ಗೆ ಭೇಟಿ ನೀಡುವುದು.
- ✓ URL ನಲ್ಲಿ "Engagement of Licensed Surveyors -2023" ಆನ್ ಲೈನ್ ಅರ್ಜಿ ಲಿಂಕ್ ಪ್ರದರ್ಶಿತವಾಗುತ್ತದೆ. ಇದನ್ನು ಕ್ಲಿಕ್ ಮಾಡುವುದು.
- ✓ ಮೊಬೈಲ್ ಸಂಖ್ಯೆಯನ್ನು ನಮೂದಿಸುವುದು.
- ✓ CAPTCHA ದಾಖಲಿಸುವುದು
- ✓ OTP Generate ಆಗುತ್ತದೆ.
- ✓ ನಮೂದಿಸಿರುವ ಮೊಬೈಲ್ ಸಂಖ್ಯೆಗೆ OTP ಬರುತ್ತದೆ.
- ✓ OTP ದಾಖಲಿಸುವುದು ಹಾಗೂ Submit ಮಾಡುವುದು.
- ✓ Submit ಮಾಡಿದ ಮೇಲೆ ಆನ್ ಲೈನ್ ಅರ್ಜಿಯಲ್ಲಿ ಅಗತ್ಯ ಎಲ್ಲಾ ಮುಖ್ಯ ವಿವರಗಳನ್ನು (ಹೆಸರು ಮತ್ತು ಆಧಾರ್ /ವೋಟರ್ ಐಡಿ ನಂಬರ್) ಭರ್ತಿ ಮಾಡಿ ಪುನ: Submit ಮಾಡುವುದು.
- ✓ APPLICATION ID ಜನರೇಟ್ ಆಗುತ್ತದೆ.
- ✓ ಅರ್ಜಿದಾರರು ಉಳಿದ ವಿವರಗಳನ್ನು ಭರ್ತಿ ಮಾಡುವುದು.
- ✓ ಅರ್ಜಿ ನಮೂನೆಗಳನ್ನು ಪೂರ್ಣಗೊಳಿಸಿದ ನಂತರ ಅಭ್ಯರ್ಥಿಯು ಭಾವಚಿತ್ರದ ಕೆಳಗೆ (ಹಾಳೆಯ ಮೇಲೆ) ಪೂರ್ಣ ಸಹಿ ಮಾಡಿ ಸ್ಕ್ಯಾನ್ ಮಾಡಿರುವ ದಾಖಲೆಯನ್ನು ಅಪ್ ಲೋಡ್ ಮಾಡುವುದು.
- ✓ ಎಲ್ಲಾ ವಿವರಗಳನ್ನು ಭರ್ತಿ ಮಾಡಿದ ನಂತರ Submit button ಒತ್ತುವುದು. ಒಮ್ಮೆ Submit ಬಟನ್ ಒತ್ತಿದ ನಂತರ ಅರ್ಜಿಯಲ್ಲಿನ ಯಾವುದೇ ಮಾಹಿತಿಯನ್ನು ಬದಲಾವಣೆ ಮಾಡಲು ಅವಕಾಶವಿರುವುದಿಲ್ಲ. ಆದುದರಿಂದ <u>Submit ಬಟನ್ ಒತ್ತುವ ಮೊದಲು, ಅರ್ಜಿಯಲ್ಲಿ ಭರ್ತಿ ಮಾಡಿರುವ ಎಲ್ಲಾ ಮಾಹಿತಿಯನ್ನು ಖಾತರಿಪಡಿಸಿಕೊಂಡು, ನಂತರ Submit ಬಟನ್ ಒತ್ತಬೇಕು.</u>
- ✓ Submit ಮಾಡಿದ ನಂತರ ಅರ್ಜಿ ಶುಲ್ಕವನ್ನು ಆನ್ ಲೈನ್ ಮೂಲಕ ಪಾವತಿಸುವುದು.
- ✓ ಆನ್ ಲೈನ್ ಮೂಲಕ ಶುಲ್ಕವನ್ನು ಪಾವತಿಸಲು ಕ್ರೆಡಿಟ್ ಕಾರ್ಡ್ / ಡೆಬಿಟ್ ಕಾರ್ಡ್/ ನೆಟ್ ಬ್ಯಾಂಕಿಂಗ್ ಮೂಲಕ ಪಾವತಿಸಬಹುದು.
- ✓ PAYMENT SUCCESS ಆದ ನಂತರ ಆನ್ ಲೈನ್ ಅರ್ಜಿ ಸಲ್ಲಿಸುವ ಕ್ರಮ ಪೂರ್ಣಗೊಳ್ಳುತ್ತದೆ.
- ✓ ಆನ್ ಲೈನ್ ಅರ್ಜಿಯನ್ನು ಸಂಪೂರ್ಣವಾಗಿ ಭರ್ತಿ ಮಾಡಿ Submit ಮಾಡಿದ ನಂತರ ಪರದೆಯ ಮೇಲೆ ಸ್ವೀಕೃತಿ ಪತ್ರ ಮೂಡುತ್ತದೆ. ಸ್ವೀಕೃತಿ ಪತ್ರ PRINT ತೆಗೆದುಕೊಂಡು, ಅದರಲ್ಲಿ ನಮೂದಿಸಿರುವ ವಿಶಿಷ್ಟ ಅರ್ಜಿ ಸಂಖ್ಯೆ (Application ID) ಯನ್ನು ಇಲಾಖೆಯೊಂದಿಗಿನ ಮುಂದಿನ ಎಲ್ಲಾ ವ್ಯವಹಾರಗಳಿಗೆ ಬಳಸುವುದು.

  <u>ಸೂಚನೆ:-</u> ಅರ್ಜಿ ಶುಲ್ಕದ ಮೊತ್ತವನ್ನು ಯಾವುದೇ ಸಂದರ್ಭದಲ್ಲಿ ಅಭ್ಯರ್ಥಿಗೆ ಹಿಂದಿರುಗಿಸುವುದಾಗಲೀ ಅಥವಾ ಬೇರೆ ಅರ್ಜಿಗೆ ಹೊಂದಾಣಿಕೆ ಮಾಡಿಕೊಳ್ಳಲು ಅವಕಾಶವಿರುವುದಿಲ್ಲ.

- ಆನ್ ಲೈನ್ ಅರ್ಜಿಯನ್ನು ಭರ್ತಿ ಮಾಡುವ ಮೊದಲು ಹುದ್ದೆಗೆ ನಿಗದಿಪಡಿಸಿದ ವಿದ್ಯಾರ್ಹತೆಯ ದಾಖಲೆಗಳನ್ನು ಪರಿಶೀಲಿಸಿ ಎಲ್ಲಾ ದಾಖಲೆಗಳನ್ನು ಭರ್ತಿ ಮಾಡುವ ಸಂದರ್ಭದಲ್ಲಿ ನಿಮ್ಮ ಹತ್ತಿರ ಇಟ್ಟುಕೊಂಡು ಭರ್ತಿ ಮಾಡುವುದು ಸೂಕ್ತವಾಗಿರುತ್ತದೆ.
- <u>ಅರ್ಜಿಯನ್ನು Submit ಮಾಡಿದ ನಂತರ ಯಾವುದೇ ತಿದ್ದುಪಡಿಗಳಿಗೆ ಅವಕಾಶವಿರುವುದಿಲ್ಲ.</u>
- ಅಭ್ಯರ್ಥಿಗಳು ಅರ್ಜಿ ಸಲ್ಲಿಸಲು ನಿಗದಿಪಡಿಸಿದ ಕೊನೆಯ ದಿನಾಂಕದವರೆಗೂ ವಿಳಂಬ ಮಾಡದೆ, ಮುಂಚಿತವಾಗಿ ಅರ್ಜಿಯನ್ನು ಸಲ್ಲಿಸತಕ್ಕದ್ದು.



2/12/23